# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 627(647) & 628(752) |
| ಮಾನ್ಯ ಸದಸ್ಯರ ಹೆಸರು | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | 11.12.2023 |
| ಉತ್ತರಿಸುವ ಸಚಿವರು | ಮಾನ್ಯ ಉನ್ನತ ಶಿಕ್ಷಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಯಾವ ಯಾವ ಹುದ್ದೆಗಳ ನೇಮಕಾತಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ; | ಪ್ರಸ್ತುತ, ಈ ಕೆಳಕಂಡ ನಿಗಮ/ಮಂಡಳಿ/ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. |
| ಆ) | ಪ್ರಸ್ತುತ ಯಾವ ಯಾವ ಇಲಾಖೆಗಳ ಎಷ್ಟು ಹುದ್ದೆಗಳ ನೇಮಕಾತಿಗಾಗಿ ಪರೀಕ್ಷೆ ನಡೆಸಲು ಸರ್ಕಾರದಿಂದ ಪ್ರಸ್ತಾವನೆಗಳು ಬಂದಿವೆ; | (see table below) |

| ನಿಗಮ/ಮಂಡಳಿ/ವಿಶ್ವವಿದ್ಯಾಲಯದ ಹೆಸರು | ಹುದ್ದೆಗಳು | |
|---|---|---|
| | ಗ್ರೂಪ್-ಬಿ | ಗ್ರೂಪ್-ಸಿ |
| ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ. | 50 | 14 |
| ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ. | – | 100 |
| ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ. | 41 | – |
| ಕರ್ನಾಟಕ ವಿದ್ಯುತ್ ನಿಗಮ ನಿಯಮಿತ. | 286 | 336 |
| ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ. | – | 2503 |
| ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ. | – | 36 |
| ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ. | 6 | 38 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಇ) | ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಯಾವುದೇ ಹುದ್ದೆಗಳ ನೇಮಕಾತಿಗಾಗಿ ಪರೀಕ್ಷೆ ನಡೆದ ನಂತರ ಮೌಲ್ಯಮಾಪನವು ತಡವಾಗಲು ಕಾರಣವೇನು; ಪ್ರತಿ ವರ್ಷ 5-6 ಲಕ್ಷದವರೆಗೂ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳು ಪರೀಕ್ಷೆ | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳ ನೇಮಕಾತಿ ಪ್ರಕ್ರಿಯೆಯು ಅಧಿಸೂಚನೆ ಹೊರಡಿಸುವುದರಿಂದ ಆರಂಭಿಸಿ, ಪರೀಕ್ಷೆಯನ್ನು ನಡೆಸಿ, ತಾತ್ಕಾಲಿಕ ಕೀ ಉತ್ತರವನ್ನು ಪ್ರಕಟಿಸಿ, ಆಕ್ಷೇಪಣೆಗಳನ್ನು ಆಹ್ವಾನಿಸಲಾಗುತ್ತದೆ. ಆಕ್ಷೇಪಣೆಗಳು ಸಾವಿರಾರು ಸಂಖ್ಯೆಗಳಲ್ಲಿ ಸ್ವೀಕೃತವಾಗುತ್ತವೆ. ಅವುಗಳನ್ನು ಪರಿಶೀಲಿಸಿ ಅಂತಿಮ ಕೀ ಉತ್ತರಗಳನ್ನು ಪ್ರಕಟಿಸಿದ ನಂತರ ಮೌಲ್ಯಮಾಪನ ಕಾರ್ಯವನ್ನು ಪ್ರಾರಂಭಿಸಬೇಕಾಗುತ್ತದೆ. ಇದರ ಜೊತೆಗೆ ಕಡ್ಡಾಯ ಕನ್ನಡ |

| | | |
|---|---|---|
| | ಬರೆದರೆ ಕೇವಲ ಎರಡೇ ಎರಡು ತಿಂಗಳಲ್ಲಿ ಫಲಿತಾಂಶ ಪ್ರಕಟಗೊಳ್ಳುತ್ತಿದ್ದು, ವಿವಿಧ ಹುದ್ದೆಗಳ ನೇಮಕಾತಿಗಾಗಿ ಅದರಲ್ಲೂ ಬಹು ಆಯ್ಕೆಯ ಸ್ವರೂಪವಿದ್ದರೂ ಕೂಡ ಮೌಲ್ಯಮಾಪನವನ್ನು 6 ತಿಂಗಳಲ್ಲಿ ಪೂರ್ಣಗೊಳಿಸಬಹುದಾಗಿದ್ದು, ಮೌಲ್ಯಮಾಪನವನ್ನು ತ್ವರಿತ ಗತಿಯಲ್ಲಿ ಮುಗಿಸಲು ಪ್ರಾಧಿಕಾರವು ಹೊಸ ಹೊಸ ತಂತ್ರಜ್ಞಾನಗಳನ್ನು ಸರ್ಕಾರವು ಬಳಸಿಕೊಳ್ಳಲು ಕ್ರಮ ಕೈಗೊಳ್ಳುವುದೇ? (ಈ ಬಗ್ಗೆ ಸ್ಪಷ್ಟನೆ ನೀಡುವುದು) | ಭಾಷೆ ಪರೀಕ್ಷೆಯು ವಿವರಣಾತ್ಮಕವಾಗಿದ್ದು, ಉತ್ತರ ಪತ್ರಿಕೆಗಳನ್ನು ಉಪನ್ಯಾಸಕರಿಂದ ಮೌಲ್ಯಮಾಪನ ಮಾಡಿಸಬೇಕಾಗುತ್ತದೆ. ತದನಂತರ ಬಹು ಆಯ್ಕೆ ಓಎಂಆರ್ ಉತ್ತರ ಪ್ರತಿಗಳ ಮೌಲ್ಯಮಾಪನ ನಡೆಸುವ ಕ್ರಮವನ್ನು ಅನುಸರಿಸಲಾಗುತ್ತದೆ.<br><br>ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಮೂಲತ: ವೃತ್ತಿಪರ ಶಿಕ್ಷಣಕ್ಕೆ ಸಂಬಂಧಿಸಿದಂತೆ ಪರೀಕ್ಷೆಗಳನ್ನು ನಡೆಸಿ, ಕೌನ್ಸಿಲಿಂಗ್ ಮೂಲಕ ಸೀಟು ಹಂಚಿಕೆ ಮಾಡುವ ಕಾರ್ಯವನ್ನು ನಿರ್ವಹಿಸುತ್ತಿದೆ. ಈ ಕಾರ್ಯವನ್ನು ಎಸ್.ಎಸ್.ಎಲ್.ಸಿ ಪರೀಕ್ಷೆಗಳ ರೀತಿಯಲ್ಲಿಯೇ ನಿಗದಿತ ಸಮಯದಲ್ಲಿ ಮೌಲ್ಯಮಾಪನ ನಡೆಸಿ ಫಲಿತಾಂಶ ಒದಗಿಸುತ್ತಾ ಬಂದಿದ್ದು, ಅದಕ್ಕೆ ಅಗತ್ಯವಾದ ಸಿದ್ಧತೆಗಳನ್ನು ಹೊಂದಿದೆ. ಪ್ರಾಧಿಕಾರವು ಈ ಕೆಲಸವನ್ನು ಪ್ರಾಮಾಣಿಕವಾಗಿ ಮತ್ತು ದಕ್ಷತೆಯಿಂದ ನಿರ್ವಹಿಸುತ್ತಿರುವ ಕಾರಣ ರಾಜ್ಯದ ವಿವಿಧ ಇಲಾಖೆ/ನಿಗಮ/ಮಂಡಳಿ/ವಿಶ್ವವಿದ್ಯಾಲಯಗಳು ಸಹ ಖಾಲಿ ಇರುವ ವಿವಿಧ ಹುದ್ದೆಗಳ ಭರ್ತಿಗಾಗಿ ನೇಮಕಾತಿ ಪ್ರಕ್ರಿಯೆಯನ್ನು ಮಾಡುವಂತೆ ಕೋರಿ ಪ್ರಸ್ತಾವನೆಗಳನ್ನು ಸಲ್ಲಿಸುತ್ತಿವೆ. ವೃತ್ತಿ ಶಿಕ್ಷಣ ಪ್ರವೇಶ ಪರೀಕ್ಷೆಯ ಜೊತೆ ಜೊತೆಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಸಹ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪ್ರಸ್ತುತ ನಡೆಸಬೇಕಾಗಿದ್ದು, ಕಾರ್ಯವ್ಯಾಪ್ತಿ ವಿಸ್ತರಣೆಗೊಂಡಿರುತ್ತದೆ. ಸ್ಪರ್ಧಾತ್ಮಕ ಪರೀಕ್ಷೆಗಳ ವಿಷಯಗಳಿಗೆ ಸಂಬಂಧಿಸಿದಂತೆ, ಪ್ರಶ್ನೆ ಪತ್ರಿಕೆಗಳನ್ನು ವಿಷಯ ತಜ್ಞರಿಂದ ತಯಾರಿಸಲು ಕೂಡಾ ತುಂಬಾ ಸಮಯಾವಕಾಶ ಬೇಕಾಗುತ್ತದೆ. ಈ ಎಲ್ಲಾ ಪ್ರಕ್ರಿಯೆಗಳಿಗೆ ಸಾಕಷ್ಟು ಅವಧಿಯು ತಗಲುತ್ತಿದೆ. ಮುಂದಿನ ದಿನಗಳಲ್ಲಿ ಸಿದ್ಧತೆಗಳನ್ನು ವಿಸ್ತರಿಸಿಕೊಂಡು ಅಲ್ಪಾವಧಿಯಲ್ಲಿ ಫಲಿತಾಂಶ ನೀಡಲು ಕಾರ್ಯಕ್ರಮ ರೂಪಿಸಲಾಗುತ್ತಿದೆ. |

ಕಡತ ಸಂಖ್ಯೆ:ಇಡಿ 492 ಟಿಇಸಿ 2023

(ಡಾ. ಎಂ.ಸಿ. ಸುಧಾಕರ್)
ಮಾನ್ಯ ಉನ್ನತ ಶಿಕ್ಷಣ ಸಚಿವರು